# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 395 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19.02.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ಶುಚಿಗೊಳಿಸಲು ವಿದ್ಯಾರ್ಥಿಗಳನ್ನು ಬಳಸಿಕೊಳ್ಳಲಾಗುತ್ತಿದೆಯೇ; ಕಳೆದ 6 ತಿಂಗಳಿನಲ್ಲಿ ಶಾಲೆಗಳಲ್ಲಿ ಶೌಚಾಲಯ ಶುಚಿಗೊಳಿಸಲು ವಿದ್ಯಾರ್ಥಿಗಳನ್ನು ಬಳಸಿಕೊಂಡ ಪ್ರಕರಣಗಳು ಎಷ್ಟು; ವರದಿಯಾಗಿವೆ; ಈ ಕುರಿತು ಸರ್ಕಾರದ ನಿಲುವೇನು; (ವಿವರ ನೀಡುವುದು) | • ಶಾಲೆಗಳಲ್ಲಿ ಶೌಚಾಲಯ ಶುಚಿಗೊಳಿಸಲು ವಿದ್ಯಾರ್ಥಿಗಳನ್ನು ಬಳಸಿಕೊಂಡ 3 ಪ್ರಕರಣಗಳು ವರದಿಯಾಗಿದ್ದು, ಸಂಬಂಧಿಸಿದವರ ಮೇಲೆ ಇಲಾಖಾ ನಿಯಮಾನುಸಾರ ಶಿಸ್ತು ಕ್ರಮವನ್ನು ಜರುಗಿಸಲಾಗಿಸುವುದರೊಂದಿಗೆ ಎಫ್.ಐ.ಆರ್ ದಾಖಲಿಸಲಾಗಿರುತ್ತದೆ.<br>• ಶೌಚಾಲಯ ಶುಚಿಗೊಳಿಸಲು ವಿದ್ಯಾರ್ಥಿಗಳನ್ನು ಬಳಸಿಕೊಳ್ಳಬಾರದೆಂದು ಸುತ್ತೋಲೆ ಸಂಖ್ಯೆ:ಎಡಿಎಂ2(4)ಶೌ.ನಿ/ 01/2023-24, ದಿ:28.12.2023ರಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ. (ಸುತ್ತೋಲೆಯನ್ನು **ಅನುಬಂಧ-1**ರಲ್ಲಿ ಲಗತ್ತಿಸಿದೆ) |
| ಆ) | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯ ಶುಚಿಗೊಳಿಸಲು ಪ್ರಸ್ತುತ ಯಾವ ರೀತಿಯ ವ್ಯವಸ್ಥೆ ಇದೆ; ಪ್ರಸ್ತುತ ಶೌಚಾಲಯಗಳನ್ನು ಶುಚಿಗೊಳಿಸಲು ಕರ್ತವ್ಯ ಯಾರ ಜವಾಬ್ದಾರಿಯಾಗಿದೆ; ಶೌಚಾಲಯವನ್ನು ಯಾರು ಯಾರಿಂದ ಶುಚಿಗೊಳಿಸಬೇಕಾಗಿದೆ; ಈ ಕುರಿತು ಸರ್ಕಾರದ ಆದೇಶದ ಪ್ರತಿಯನ್ನು ಒದಗಿಸುವುದು; | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡಲಾಗುತ್ತಿದ್ದು, ಸದರಿ ಅನುದಾನವನ್ನು ಸರ್ಕಾರಿ ಪ್ರೌಢಶಾಲೆಗಳಿಗೆ ರಾಜ್ಯದ ಎಲ್ಲಾ ಉಪನಿರ್ದೇಶಕರ ಮೂಲಕ ಹಾಗೂ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ಶಾಲಾ ಮುಖ್ಯ ಶಿಕ್ಷಕರ/ಎಸ್.ಡಿ.ಎಂ.ಸಿ ಅಧ್ಯಕ್ಷರ ಜಂಟಿ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಲಾಗಿದೆ.<br><br>ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರು/ಎಸ್.ಡಿ.ಎಂ.ಸಿಯು ಶೌಚಾಲಯ ಶುಚಿ ಸೇರಿದಂತೆ ಶಾಲಾ ನಿರ್ವಹಣೆಗೆ ಸಂಬಂಧಿಸಿದ ಖರ್ಚನ್ನು ನಿಯಮಾನುಸಾರ ಭರಿಸಲು ಆದೇಶಿಸಲಾಗಿದೆ<br><br>ಸದರಿ ಅನುದಾನದಿಂದ ಪ್ರಥಮ ಪ್ರಾಶಸ್ತ್ಯದಲ್ಲಿ ಶೌಚಾಲಯಗಳ ಸ್ವಚ್ಚತಾ ಕಾರ್ಯಗಳಿಗೆ ಬಳಸಿಕೊಂಡು ಆಯಾ ಎಸ್.ಡಿ.ಎಂ.ಸಿ ಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯಗಳ ಸ್ವಚ್ಚತಾ ಕಾರ್ಯವನ್ನು ಕೈಗೊಳ್ಳಲು |

| | | |
|---|---|---|
| | | ಸೂಚಿಸಲಾಗಿದೆ. (ಸಂಬಂಧಿಸಿದ ಜ್ಞಾಪನವನ್ನು **ಅನುಬಂಧ-2ರಲ್ಲಿ** ಒದಗಿಸಿದೆ.)<br><br>ಮುಂದುವರೆದು 2023-24ನೇ ಸಾಲಿನಲ್ಲಿ ನಿರ್ವಹಣಾ ವೆಚ್ಚವನ್ನು ಮಕ್ಕಳ ದಾಖಲಾತಿಗೆ ಅನುಗುಣವಾಗಿ ಮೂರು ಪಟ್ಟು ಹೆಚ್ಚು ಅನುದಾನವನ್ನು ಮಂಜೂರು ಮಾಡಲಾಗಿದ್ದು.ವಿವರ ಕೆಳಕಂಡಂತಿದೆ. |

| ಕ್ರ.ಸಂ | ಮಕ್ಕಳ ಸಂಖ್ಯೆ | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ | ಘಟಕ ವೆಚ್ಚ (ರೂ.ಗಳಲ್ಲಿ) | ನಿಗದಿ ಮಾಡಲಾದ ಒಟ್ಟು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|---|
| 1 | 1-50 | 23,342 | 20,000/- | 46.68 |
| 2 | 51-100 | 9,229 | 28,000/- | 25.84 |
| 3 | 101-500 | 13,624 | 33,000/- | 44.96 |
| 4 | 501 + | 634 | 45,000/- | 2.85 |
| | | ಒಟ್ಟು | | **120.33** |

| | | |
|---|---|---|
| ಇ) | ಕಳೆದ 9 ತಿಂಗಳಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಷ್ಟು ಶೌಚಾಲಯಗಳನ್ನು ಯಾರಿಂದ ಶುಚಿಗೊಳಿಸಲಾಗಿದೆ; | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಪ್ರತಿ ವರ್ಷ ಅನುದಾನ ಬಿಡುಗಡೆ ಮಾಡಲಾಗುತ್ತಿದೆ.<br>ಸದರಿ ಅನುದಾನದಿಂದ ಪ್ರಥಮ ಪ್ರಾಶಸ್ತ್ಯದಲ್ಲಿ ಶೌಚಾಲಯಗಳ ಸ್ವಚ್ಚತಾ ಕಾರ್ಯಗಳಿಗೆ ಬಳಸಿಕೊಂಡು ಆಯಾ ಶಾಲಾ ಎಸ್.ಡಿ.ಎಂ.ಸಿ ಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಕಾಲ ಕಾಲಕ್ಕೆ ರಾಜ್ಯದ ಎಲ್ಲಾ ಶಾಲಾ ಶೌಚಾಲಯಗಳ ಸ್ವಚ್ಚತಾ ಕಾರ್ಯವನ್ನು ಕೈಗೊಳ್ಳಲಾಗಿದೆ. |
| ಈ) | ಶೌಚಾಲಯಗಳ ಆಶುಚಿತ್ವದಿಂದ ಮಕ್ಕಳು ಸೋಂಕಿನ ರೋಗಗಳಿಗೆ ತುತ್ತಾಗುವುದಿಲ್ಲವೇ? ಇದಕ್ಕೆ ಹೊಣೆಗಾರರು ಯಾರು? (ವಿವರ ನೀಡುವುದು) | ಹೌದು.<br>ಆದ್ದರಿಂದಲೇ ಶೌಚಾಲಯ ಸ್ವಚ್ಛಗೊಳಿಸಲು ಕಳೆದ ಸಾಲಿಗೆ ಹೋಲಿಸಿದರೆ 2023-24ನೇ ಸಾಲಿನಲ್ಲಿ ನಿರ್ವಹಣಾ ವೆಚ್ಚವನ್ನು ಮೂರು ಪಟ್ಟು ಹೆಚ್ಚು ಅನುದಾನವನ್ನು ಮಂಜೂರು ಮಾಡಲಾಗಿದ್ದು. ಶೌಚಾಲಯ ಸ್ವಚ್ಚತೆಗೆ ಸಂಬಂಧಿಸಿದಂತೆ ಸುತ್ತೋಲೆ ಹೊರಡಿಸಲಾಗಿದೆ. |

**ಇಪಿ 76 ಯೋಸಕ 2024**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**

ಅನುಬಂಧ-1 LCQ-395

ಕರ್ನಾಟಕ ಸರ್ಕಾರ

**ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

**ಸಂಖ್ಯೆ:-ಎಡಿಎಂ2(4)ಶೌ.ನಿ/01/2023-24.** **ದಿನಾಂಕ: 28.12.2023.**

**-: ಸುತ್ತೋಲೆ:-**

ವಿಷಯ:-ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯನ್ನು ನಿರ್ವಹಿಸಲು ವಿದ್ಯಾರ್ಥಿಗಳನ್ನು ಬಳಸದಿರುವ ಕುರಿತು ಸೂಚನೆಗಳು.

ಉಲ್ಲೇಖ:- ಈ ಕಛೇರಿಯ ಸುತ್ತೋಲೆ ಸಂಖ್ಯೆ: ಯೋ8/ಕುನಿಶೌಅಬಿ/07/2023-24 ದಿನಾಂಕ: 21.09.2023.

*******

ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಇತ್ತೀಚಿಗೆ ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕರು ಶೌಚಾಲಯಗಳನ್ನು ವಿದ್ಯಾರ್ಥಿಗಳಿಂದ ಸ್ವಚ್ಛತೆ ಮಾಡಿಸುತ್ತಿರುವ ಕುರಿತಾದ ಘಟನೆಗಳು ಸರ್ಕಾರದ ಮತ್ತು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಶಾಲೆಗಳಲ್ಲಿ ವಿದ್ಯಾರ್ಥಿಗಳನ್ನು ಶೈಕ್ಷಣಿಕ ಚಟುವಟಿಕೆಗಳಲ್ಲಿ, ಸಹ ಪಠ್ಯ ಚಟುವಟಿಕೆಗಳಲ್ಲಿ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಮಾತ್ರ ತೊಡಗಿಸಿಕೊಳ್ಳಬೇಕಾಗುತ್ತದೆ. ವಿದ್ಯಾರ್ಥಿಗಳನ್ನು ಶೌಚಾಲಯಗಳ ಸ್ವಚ್ಛತೆಯಂತಹ ಕಾರ್ಯಗಳಿಂದ ದೂರವಿರಿಸುವುದು ಅಧಿಕಾರಿಗಳ, ಮುಖ್ಯ ಶಿಕ್ಷಕರ, ಶಿಕ್ಷಕರ, ಸಿಬ್ಬಂದಿಗಳ ಕರ್ತವ್ಯವಾಗಿರುತ್ತದೆ. ಆದರೆ ಅವರುಗಳು ಈ ಹೊಣೆಗಾರಿಕೆಯನ್ನು ಮರೆತು ವಿದ್ಯಾರ್ಥಿಗಳನ್ನು ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತೆಯಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು ಆಕ್ಷೇಪಣೀಯ ಮತ್ತು ಖಂಡನೀಯ. ಇಂತಹ ಘಟನೆಗಳನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಈ ಹಿನ್ನಲೆಯಲ್ಲಿ ರಾಜ್ಯದ ಸರ್ಕಾರಿ ಶಾಲೆಗಳಲ್ಲಿನ ಶೌಚಾಲಯಗಳ ಸ್ವಚ್ಛತೆಯನ್ನು ನಿರ್ವಹಿಸುವ ಕುರಿತು ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸಂಬಂಧಿಸಿದ ಎಲ್ಲರಿಗೂ ತಿಳಿಸಲಾಗಿದೆ.

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯ ಮತ್ತು ನಿರ್ವಹಣೆಯನ್ನು ಯಾವುದೇ ಕಾರಣಕ್ಕೂ, ಯಾವುದೇ ಸಂದರ್ಭದಲ್ಲಿಯೂ ಸಹ ವಿದ್ಯಾರ್ಥಿಗಳಿಂದ ಕೈಗೊಳ್ಳುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.
2. ಉಲ್ಲೇಖಿತ ಸುತ್ತೋಲೆಯ ಅನುಸಾರ ಶಾಲಾ ನಿರ್ವಹಣಾ ಅನುದಾನವನ್ನು ಆಯಾ ಸರ್ಕಾರಿ ಶಾಲೆಗಳಿಗೆ ಪ್ರಸ್ತುತ ಸಾಲಿಗೆ ಈಗಾಗಲೇ ಬಿಡುಗಡೆ ಮಾಡಲಾಗಿದೆ. ಸದರಿ ಅನುದಾನವನ್ನು ಪ್ರಥಮ ಪ್ರಾಶಸ್ತ್ಯದಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯಗಳಿಗೆ ಬಳಸಿಕೊಂಡು ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ಗಳ ಸಹಕಾರದೊಂದಿಗೆ, ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯಗಳ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳತಕ್ಕದ್ದು.
3. ಒಂದು ವೇಳೆ ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿಗಳು, ಶಾಲಾ ಮುಖ್ಯ ಶಿಕ್ಷಕರು, ಶಿಕ್ಷಕರು ಮತ್ತು ಸಿಬ್ಬಂದಿಗಳಾಗಲಿ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಗಾಗಿ ಬಳಸಿಕೊಂಡಲ್ಲಿ ಅಂತಹವರ ಮೇಲೆ ಇಲಾಖಾ ವತಿಯಿಂದ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು ಹಾಗೂ ಪ್ರಥಮ ವರ್ತಮಾನ ವರದಿ (FIR) ದಾಖಲಿಸಲಾಗುವುದು ಎಂದು ಎಚ್ಚರಿಸಲಾಗಿದೆ.
4. ಆಯಾ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳು ವಿದ್ಯಾರ್ಥಿಗಳಿಗೆ ಈ ಕುರಿತು ಅರಿವು ಮೂಡಿಸತಕ್ಕದ್ದು ಹಾಗೂ ಯಾವುದೇ ವಿದ್ಯಾರ್ಥಿಗಳು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಬಹುದಾಗಿರುತ್ತದೆ.

5. ಶಾಲೆಗಳಿಗೆ ಕಾಲ-ಕಾಲಕ್ಕೆ ಖುದ್ದು ಭೇಟಿ ನೀಡಿ ಶಾಲೆಗಳಲ್ಲಿ ಹೆಣ್ಣು ಮಕ್ಕಳು ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಬಳಕೆಗೆ ಯೋಗ್ಯವಾದ ಶೌಚಾಲಯಗಳು ಲಭ್ಯವಿರುವುದನ್ನು ಪರಿಶೀಲಿಸಿ ಮತ್ತು ಶಾಲಾ ಅವಧಿಯಲ್ಲಿ ಈ ಶೌಚಾಲಯಗಳಿಗೆ ಬೀಗ ಹಾಕದೇ ವಿದ್ಯಾರ್ಥಿಗಳ ಉಪಯೋಗಕ್ಕೆ ಅವಕಾಶ ಕಲ್ಪಿಸಿರುವುದನ್ನು ಹಾಗೂ ವಿದ್ಯಾರ್ಥಿಗಳನ್ನು ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದಿಲ್ಲ ಎಂಬ ಅಂಶಗಳನ್ನು ಖುದ್ದಾಗಿ ಪರಿಶೀಲಿಸಿ ಖಚಿತಪಡಿಸಿಕೊಳ್ಳುವಂತೆ ಶಾಲಾ ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಈ ಮೂಲಕ ಸೂಚಿಸಲಾಗಿದೆ.
6. ಶಾಲೆಯ ಸಂದರ್ಶನದ ವೇಳೆಯಲ್ಲಿ ಒಂದು ವೇಳೆ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಂಡಿರುವುದು ಗಮನಕ್ಕೆ ಬಂದಲ್ಲಿ, ಅದಕ್ಕೆ ಕಾರಣರಾದವರ ಮೇಲೆ ಮೇಲ್ಕಂಡಂತೆ ತತ್‌ಕ್ಷಣವೇ ಕ್ರಮವಹಿಸಲು ಅನುವಾಗುವಂತೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಉಪನಿರ್ದೇಶಕರು (ಆಡಳಿತ)ರವರಿಗೆ ತಕ್ಷಣ ವರದಿ ಮಾಡಲು ಶಾಲಾ ಉಸ್ತುವಾರಿ ಹಾಗೂ ಮೇಲ್ವಿಚಾರಣೆಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ತಿಳಿಸಿದೆ.
7. ಅದರಂತೆ ಇಂತಹ ಪ್ರಕರಣಗಳಲ್ಲಿ ತತ್‌ಕ್ಷಣವೇ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು(ಆಡಳಿತ)ರವರು ಮೇಲೆ ತಿಳಿಸಿರುವಂತೆ ಸಂಬಂಧಿಸಿದವರ ಮೇಲೆ ಜರೂರಾಗಿ ಕ್ರಮವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ. ತಪ್ಪಿದಲ್ಲಿ ಅಥವಾ ನಿರ್ಲಕ್ಷತನ ತೋರಿದಲ್ಲಿ ಮತ್ತು ಇಂತಹ ಪ್ರಕರಣಗಳು ಮರುಕಳಿಸಿದಲ್ಲಿ ಅದಕ್ಕೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಉಪನಿರ್ದೇಶಕರು(ಆಡಳಿತ) ರವರನ್ನೇ ನೇರ ಹೊಣೆಗಾರರನ್ನಾಗಿಸಿ ಇಲಾಖೆ ನಿಯಮಾನುಸಾರ ಶಿಸ್ತು ಕ್ರಮಗಳನ್ನು ಜರುಗಿಸಲಾಗುವುದು ಎಂದು ಎಚ್ಚರಿಸಲಾಗಿದೆ.
8. ಇದೇ ರೀತಿ ಖಾಸಗಿ ಅನುದಾನಿತ ಮತ್ತು ಅನುದಾನರಹಿತ ಶಾಲೆಗಳಲ್ಲಿಯು ಸಹ ಇಂತಹ ಯಾವುದೇ ಪ್ರಕರಣಗಳು ಜರುಗದಂತೆ ಸಂಬಂಧಪಟ್ಟ ಶಾಲಾ ಆಡಳಿತ ಮಂಡಳಿಗಳು ಹಾಗೂ ಶಾಲಾ ಮುಖ್ಯಸ್ಥರು ಎಚ್ಚರಿಕೆ ವಹಿಸಲು ತಿಳಿಸಿದೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಹಾಗೂ ಈ ಕುರಿತು ಸರ್ಕಾರದಿಂದ ಮತ್ತು ಇಲಾಖೆಯಿಂದ ಕಾಲ-ಕಾಲಕ್ಕೆ ಹೊರಡಿಸಲಾಗುವ ಸೂಚನೆಗಳನ್ನು ಮತ್ತು ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸಲು ಹಾಗೂ ವಿದ್ಯಾರ್ಥಿಗಳನ್ನು ಶಾಲಾ ಶೌಚಾಲಯಗಳ ಸ್ವಚ್ಛತೆಯಲ್ಲಿ ತೊಡಗಿಸಿಕೊಳ್ಳುವಂತಹ ಪ್ರಕರಣಗಳು ಮರುಕಳಿಸದಂತೆ ಸೂಕ್ತ ಎಚ್ಚರಿಕೆ ಕ್ರಮಗಳನ್ನು ವಹಿಸುವಂತೆ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಮತ್ತು ಸಂಬಂಧಿಸಿದ ಎಲ್ಲಾ ಇಲಾಖಾಧಿಕಾರಿಗಳಿಗೆ ಈ ಮೂಲಕ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

೨೦.೧೦.೦೧/೨೦೧೮

ಬಿ.ಬಿ. ಕಾವೇರಿ., ಭಾ.ಆ.ಸೇ
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
3. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕ ವೃಂದದ ಅಧಿಕಾರಿಗಳಿಗೆ / ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.

4. ಜಂಟಿ ನಿರ್ದೇಶಕರು(ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಹ ನಿರ್ದೇಶಕರು (ಶಾಲಾ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರಿಗೆ.
7. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಸಹ / ಜಂಟಿ ನಿರ್ದೇಶಕ ವೃಂದದ ಅಧಿಕಾರಿಗಳಿಗೆ.
8. ರಾಜ್ಯದ ಎಲ್ಲಾ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ(ಸಿ.ಟಿ.ಇ.)ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಸಹನಿರ್ದೇಶಕರಿಗೆ.
9. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ)ರವರಿಗೆ.
10. ರಾಜ್ಯದ ಎಲ್ಲಾ ಡಯಟ್‌ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
11. ಉಪನಿರ್ದೇಶಕರು, ಯೋಜನೆ, ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
12. ಹಿರಿಯ ಸಹಾಯಕ ನಿರ್ದೇಶಕರು (ಇ–ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
13. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ).
14. ರಾಜ್ಯದ ಎಲ್ಲಾ ಶಿಕ್ಷಕರ ತರಬೇತಿ ಕೇಂದ್ರಗಳ (ಟಿ.ಟಿ.ಇ.) ಪ್ರಾಂಶುಪಾಲರಿಗೆ (ಆಯಾ ಡಯಟ್ ಪ್ರಾಂಶುಪಾಲರ ಮೂಲಕ).
15. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
16. ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).
17. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಲ್ಲಾ ಶಿಕ್ಷಕರಿಗೆ ಮತ್ತು ಸಿಬ್ಬಂದಿಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).

**ಪ್ರತಿಯನ್ನು,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ.
6. ಕಛೇರಿ ಪ್ರತಿ.

ಅನುಬಂಧ - 2 LCQ -395

ಕರ್ನಾಟಕ ಸರ್ಕಾರ

ಶಾಲಾ ಶಿಕ್ಷಣ ಇಲಾಖೆ

**ಆಯುಕ್ತರ ಕಛೇರಿ,ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗರಸ್ತೆ, ಬೆಂಗಳೂರು–560001.**

ಸಂಖ್ಯೆ:ಯೋ8/ಕುನಿಶೌಅಬಿ/07/2023–24 ದಿನಾಂಕ: 21.09.2023

ಜ್ಞಾಪನ

ವಿಷಯ: 2023–24 ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯಗಳ ವಾರ್ಷಿಕ ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ:ಇಪಿ49 ಯೋಯೋಕ 2023, ದಿನಾಂಕ:20.04.2023.
2. ಸರ್ಕಾರದ ಆದೇಶ ಸಂಖ್ಯೆ:ಇಪಿ49 ಯೋಯೋಕ 2023, ದಿನಾಂಕ:29.08.2023.
3. ಈ ಕಛೇರಿ ಜ್ಞಾಪನ ಸಂಖ್ಯೆ:ಯೋ1/ಮುಯೋಕಾ 02/2023(1072554) ದಿನಾಂಕ: 01.09.2023.
4. ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ: ಆಇ 877 ವೆಚ್ಚ–8/2022 ದಿನಾಂಕ:20.12.2022.
5. ಸರ್ಕಾರದ ಆದೇಶ ಸಂಖ್ಯೆ:ಇಪಿ 118 ಯೋಸಕ 2023(ಭಾಗ–4), ದಿನಾಂಕ:11.09.2023.

************

**ಪ್ರಸ್ತಾವನೆ:–**

2023–24 ನೇ ಸಾಲಿನ ಆಯವ್ಯಯದಲ್ಲಿ ಘೋಷಿತವಾದಂತೆ ಉಲ್ಲೇಖಿತ ಸರ್ಕಾರದ ಆದೇಶ ಮತ್ತು ಉಲ್ಲೇಖ (3)ರ ಕಛೇರಿ ಜ್ಞಾಪನದನ್ವಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ ಮತ್ತು ಶಾಲೆಯ ಇತರೇ ನಿರ್ವಹಣೆಗೆ ಖರ್ಚು ಭರಿಸಲು 'ಶಾಲಾ ಕಟ್ಟಡಗಳ ನಿರ್ವಹಣೆ' ಲೆಕ್ಕ ಶೀರ್ಷಿಕೆ:2202–01–053–0–02ರ (059) ಅಡಿಯಲ್ಲಿ ಹಾಗೂ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಬರುವ ಉಪ ಶೀರ್ಷಿಕೆ–(422)(423) ರಲ್ಲಿ ಮತ್ತು ಉಲ್ಲೇಖ(5)ರನ್ವಯ ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿ ಬರುವ ಲೆಕ್ಕ ಶೀರ್ಷಿಕೆ 2202–02–001–0–09(422)(423) ರಡಿ ನಿಗದಿಯಾದ ಅನುದಾನದಲ್ಲಿ ಈ ಕೆಳಕಂಡಂತೆ ಶಾಲೆಗಳಿಗೆ ಘಟಕ ವೆಚ್ಚ ಮತ್ತು ಅನುದಾನವನ್ನು ನಿಗದಿಪಡಿಸಲಾಗಿದೆ.

| ಕ್ರಮ ಸಂಖ್ಯೆ | ಮಕ್ಕಳ ಸಂಖ್ಯೆ | ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ | ಘಟಕ ವೆಚ್ಚ ರೂಗಳಲ್ಲಿ | ನಿಗದಿ ಮಾಡಲಾದ ಒಟ್ಟು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|---|
| 1 | 1–50 | 23,342 | ರೂ.20,000/– | 46.68 |
| 2 | 51–100 | 9,229 | ರೂ.28,000/– | 25.84 |
| 3 | 101–500 | 13,624 | ರೂ.33,000/– | 44.96 |
| 4 | 501 + | 634 | ರೂ.45,000/– | 2.85 |
| ಒಟ್ಟು | | | | **120.33** |

*ಆರ್ಥಿಕ ಇಲಾಖೆಯು ಉಲ್ಲೇಖ(4)ರಲ್ಲಿ ಶಾಲಾ ಸೌಲಭ್ಯಗಳ ನಿರ್ವಹಣೆಗೆ ಒದಗಿಸಲಾದ ಅನುದಾನವನ್ನು ಸಿ.ಟಿ.ಎಸ್–8 ಮುಖಾಂತರ ಸೆಳೆದು ಸಂಬಂಧಿಸಿದ ಶಾಲೆಗಳ ಎಸ್.ಡಿ.ಎಂ.ಸಿ. ಖಾತೆಗೆ ವರ್ಗಾಯಿಸಲು ಈ ಕೆಳಕಂಡ 3 ಷರತ್ತು ವಿಧಿಸಿ ಅನುಮತಿಸಿದೆ.*

1. *ಪ್ರಾಥಮಿಕ ಶಾಲೆಗಳು ಮತ್ತು ಕೆ.ಕೆ.ಜಿ.ಬಿ.ವಿ. ಮುಂತಾದ **DDO** ಇಲ್ಲದಿರುವ ಶಾಲೆಗಳಲ್ಲಿ ಅನುದಾನವನ್ನು ಸೆಳೆದು **SDMC** ಬ್ಯಾಂಕ್ ಖಾತೆಯಲ್ಲಿಟ್ಟು ನಿರ್ವಹಿಸುವುದು.*
2. *ಪ್ರೌಢಶಾಲೆಗಳು **(Secondary Schools)** ಮತ್ತು ಕೆ.ಪಿ.ಎಸ್. ಶಾಲೆಗಳಲ್ಲಿ **DDO** ರವರು ಇರುವುದರಿಂದ ಡಿ.ಸಿ. ಬಿಲ್ಲಿನ ಮೂಲಕ ಖಜಾನೆಯಲ್ಲಿ ಪ್ರತಿಯೊಂದು ವೆಚ್ಚವನ್ನು ಭರಿಸಬಹುದಾಗಿದೆ.*

*3. SDMC ಬ್ಯಾಂಕ್ ಖಾತೆಗಳಿಗೆ ಠೇವಣಿ ಮಾಡಿದ ಹಣವನ್ನು ಆಯಾ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳು (ಬಿ.ಇ.ಓ.) ಮೇಲ್ವಿಚಾರಣೆ ಮಾಡುವುದು*

ಮುಂದುವರೆದು ಸದರಿ ಯೋಜನೆಯ ಅನುಷ್ಠಾನಕ್ಕೆ ಉಲ್ಲೇಖ(3) ಮತ್ತು (5)ರನ್ವಯ ರೂ 4352.47 ಲಕ್ಷಗಳ ಅನುದಾನ ಮೊದಲ ಮತ್ತು ಎರಡನೇ ತ್ರೈಮಾಸಿಕ ಅವಧಿಗೆ ಬಿಡುಗಡೆಯಾಗಿರುತ್ತದೆ. ಪ್ರೌಢಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ಉಪನಿರ್ದೇಶಕರು (ಆ) ರವರುಗಳಿಗೆ ಹಾಗೂ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಈ ಕೆಳಕಂಡ ಆದೇಶದಂತೆ ಬಿಡುಗಡೆ ಮಾಡಲಾಗಿದೆ.

**ಆದೇಶ:-**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2023-24ನೇ ಸಾಲಿಗೆ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಕುಡಿಯುವ ನೀರು ಮತ್ತು ಶೌಚಾಲಯ ನಿರ್ವಹಣೆಗಾಗಿ ಮತ್ತು ಶಾಲೆಯ ಇತರೇ ನಿರ್ವಹಣೆಗೆ ಖರ್ಚು ಭರಿಸಲು 'ಶಾಲಾ ಕಟ್ಟಡಗಳ ನಿರ್ವಹಣೆ' ಲೆಕ್ಕ ಶೀರ್ಷಿಕೆ:2202-01-053-0-02ರ (059) ಅಡಿಯಲ್ಲಿ ಹಾಗೂ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಬರುವ ಉಪ ಶೀರ್ಷಿಕೆ-(422)(423) ರಲ್ಲಿ ಮತ್ತು ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪಯೋಜನೆಯಡಿ ಬರುವ ಲೆಕ್ಕ ಶೀರ್ಷಿಕೆ 2202-02-001-0-09(422)(423) ರಡಿ ಪ್ರಥಮ ಮತ್ತು ದ್ವಿತೀಯ ತ್ರೈಮಾಸಿಕ ಅನುದಾನ ರೂ 4352.47 ಲಕ್ಷಗಳನ್ನು 2022-23ನೇ ಸಾಲಿನ ಸ್ಯಾಟ್ಸ್‌ನಲ್ಲಿ ಲಭ್ಯವಿರುವ ಶಾಲೆಗಳ ಸಂಖ್ಯೆಗನುಗುಣವಾಗಿ ಅನುಬಂಧಗಳಂತೆ ಜಿಲ್ಲಾವಾರು ಮತ್ತು ತಾಲ್ಲೂಕುವಾರು ಅನುದಾನ ಹಂಚಿಕೆ ಮಾಡಿ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆ) ರವರುಗಳಿಗೆ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ.

| ಕ್ರ ಸಂ | ಲೆಕ್ಕ ಶೀರ್ಷಿಕೆ | ಸರ್ಕಾರದಿಂದ ಪ್ರಥಮ ಮತ್ತು ದ್ವಿತೀಯ ತ್ರೈಮಾಸಿಕ ಅವಧಿಗೆ ಬಿಡುಗಡೆ ಮಾಡಿದ ಅನುದಾನ ರೂ ಲಕ್ಷಗಳಲ್ಲಿ | ಪ್ರಸ್ತುತ ಬಿಡುಗಡೆ ಮಾಡಿದ ಅನುದಾನ ರೂ ಲಕ್ಷಗಳಲ್ಲಿ | ಷರಾ |
|---|---|---|---|---|
| 1 | 2202-01-053-0-02-059 | 2616.93 | 2616.93 | ಅನುಬಂಧ-1 |
| 2 | 2202-01-053-0-02-422 | 1113.60 | 1113.60 | ಅನುಬಂಧ-2 |
| 3 | 2202-01-053-0-02-423 | 451.28 | 451.28 | ಅನುಬಂಧ-3 |
| 4 | 2202-02-001-0-09-422 | 140.96 | 140.96 | ಅನುಬಂಧ-2 |
| 5 | 2202-02-001-0-09-423 | 29.70 | 29.70 | ಅನುಬಂಧ-3 |
| ಒಟ್ಟು | | 4352.47 | 4352.47 | |

1. ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ಉಲ್ಲೇಖ(4)ರನ್ವಯ ರಾಜ್ಯದ ಎಲ್ಲಾ ಉಪನಿರ್ದೇಶಕರು (ಆ) ರವರಿಗೆ D-Mode ಮೂಲಕ ಕೆ-2ನಲ್ಲಿ CO(Controlling Officer) ಖಾತೆಗಳಿಗೆ ಬಿಡುಗಡೆ ಮಾಡಲಾಗಿದೆ, ಅನುಬಂಧಗಳಂತೆ ಅನುದಾನವನ್ನು ಸಂಬಂಧಿಸಿದ ಪ್ರೌಢಶಾಲೆಗಳಿಗೆ ಕೆ-2ನಲ್ಲಿ U-Mode ನಲ್ಲಿ ತಮ್ಮ ಜಿಲ್ಲಾ ಸರ್ಕಾರಿ ಪ್ರೌಢಶಾಲೆಗಳಿಗೆ ಕೆ-2ನಲ್ಲಿ DDO ಖಾತೆಗಳಿಗೆ ಬಿಡುಗಡೆಗೊಳಿಸುವುದು ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರು ಅನುದಾನವನ್ನು ಬಿಲ್ ಸಿದ್ಧಪಡಿಸಿ ಖಜಾನೆಯಿಂದ ಅನುದಾನವನ್ನು ಸೆಳೆಯುವುದು ಮತ್ತು ಶಾಲಾ ನಿರ್ವಹಣೆಗೆ ಖರ್ಚನ್ನು ನಿಯಮಾನುಸಾರ ಭರಿಸುವುದು.
2. ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದ ಅನುದಾನವನ್ನು ಉಲ್ಲೇಖ(4)ರನ್ವಯ ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ DDO ಖಾತೆಗಳಿಗೆ U-Modeನಲ್ಲಿ ಬಿಡುಗಡೆ ಮಾಡಲಾಗಿದೆ ಅನುಬಂಧಗಳಂತೆ ಅನುದಾನವನ್ನು ಸಂಬಂಧಿಸಿದ ಪ್ರಾಥಮಿಕ ಶಾಲೆಗಳಿಗೆ ಕೆ-2ನಲ್ಲಿ ಬಿಲ್ ಸಿದ್ಧಪಡಿಸಿ ಖಜಾನೆಯಿಂದ ಅನುದಾನವನ್ನು ಸೆಳೆದು ಸಂಬಂಧಿಸಿದ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ/ಎಸ್.ಡಿ.ಎಂ.ಸಿ ಅಧ್ಯಕ್ಷರ ಜಂಟಿ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡುವುದು ಮತ್ತು ಆಯಾ ಮುಖ್ಯ ಶಿಕ್ಷಕರು ಶಾಲಾ ನಿರ್ವಹಣೆಗೆ ಸಂಬಂಧಿಸಿದ ಖರ್ಚನ್ನು ನಿಯಮಾನುಸಾರ ಭರಿಸುವುದು ಅಥವಾ ನಿರ್ವಹಣಾ ವೆಚ್ಚದ ಸಾಮಗ್ರಿಗಳನ್ನು ಪೂರೈಕೆ ಮಾಡಿದ ಮತ್ತು

ನಿರ್ವಹಣಾ ಸೇವೆಯನ್ನು ಪಡೆದ ಬಗ್ಗೆ ಸಂಬಂಧಿತ ವೋಚರ್‌ಗಳನ್ನು ಮುಖ್ಯೋಪಾಧ್ಯಾಯರುಗಳಿಂದ ಪಡೆದು Supplier and Service Providerಗೆ ನೇರವಾಗಿ ಪಾವತಿಸಲು ಸಹ ಅನುಮತಿಸಿದೆ.

3. ಬಿಡುಗಡೆ ಮಾಡಲಾದ ಅನುದಾನವನ್ನು ಶಾಲೆಗಳಲ್ಲಿ ಕುಡಿಯುವ ನೀರು, ಶೌಚಾಲಯಗಳ ನಿರ್ವಹಣೆ ಮತ್ತು ಇತರೇ ಶಾಲಾ ನಿರ್ವಹಣೆಗೆ ಅನುಬಂಧ-೩ ರಲ್ಲಿ ಸೂಚಿಸಿರುವಂತೆ ವಾರ್ಷಿಕ ನಿರ್ವಹಣೆಯ ಉದ್ದೇಶಕ್ಕಾಗಿ ಮಾತ್ರ ನಿಯಮಾನುಸಾರ ಭರಿಸತಕ್ಕದ್ದು.
4. ಅನುಬಂಧ 1 ರಿಂದ 3 ರವರೆಗಿನ ಅನುಬಂಧದಲ್ಲಿ ಅನುದಾನ ಬಿಡುಗಡೆಯ ಘಟಕ ವೆಚ್ಚದ ಪ್ರಮಾಣವನ್ನು ನಮೂದಿಸಲಾಗಿದ್ದು ಅದರಂತೆ ತಮ್ಮ ಶಾಲೆಗಳಿಗನುಗುಣವಾಗಿ ಅನುದಾನ ಬಿಡುಗಡೆಗೆ ಕ್ರಮವಹಿಸುವುದು. ಶಾಲೆಯ ದಾಖಲಾತಿ ಪ್ರಮಾಣವನ್ನು ಹಿಂದಿನ ಸಾಲಿನ ಸ್ಯಾಟ್ಸ್ ದಾಖಲಾತಿ ಆಧರಿಸಿ ಅನುದಾನ ಬಿಡುಗಡೆ ಮಾಡಲಾಗಿದೆ.

ಸಂಬಂಧಪಟ್ಟ ಜಿಲ್ಲಾ ಆಡಳಿತ ಉಪನಿರ್ದೇಶಕರು ನಿರಂತರವಾಗಿ ಅನುಪಾಲನೆಯಲ್ಲಿದ್ದು ಅನುದಾನ ಸೆಳೆಯಲು ಅಗತ್ಯ ಕ್ರಮಕೈಗೊಳ್ಳುವುದು.

**ಈ ಸಂಬಂಧ ಎಲ್ಲಾ ಸಂಬಂಧಪಟ್ಟ ಉಪನಿರ್ದೇಶಕರು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯ ಎಲ್ಲಾ ಸರ್ಕಾರಿ ಶಾಲೆಗಳಿಗೆ ಅನುದಾನ ಬಳಸಿಕೊಂಡ ಬಗ್ಗೆ ಖಚಿತಪಡಿಸಿಕೊಳ್ಳುವುದು ಹಾಗೂ ಮುಖ್ಯೋಪಾಧ್ಯಾಯರುಗಳಿಗೆ ಕಡ್ಡಾಯವಾಗಿ ಈ ಜ್ಞಾಪನದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡತಕ್ಕದ್ದು.**

ಬಿಡುಗಡೆಯಾದ ಅನುದಾನಕ್ಕೆ ಸಂಬಂಧಪಟ್ಟ ಮುಖ್ಯೋಪಾಧ್ಯಾಯರುಗಳು ಸೂಕ್ತ ಲೆಕ್ಕ ಪತ್ರಗಳನ್ನು ಇಡತಕ್ಕದ್ದು ಹಾಗೂ ಬಳಕೆ ಪ್ರಮಾಣ ಪತ್ರವನ್ನು ನಿಯಮಾನುಸಾರ ಆಯಾ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮುಖ್ಯ ಶಿಕ್ಷಕರಿಂದ ಸಂಗ್ರಹಿಸಿ ಕ್ರೋಢೀಕೃತ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಈ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಲು ತಿಳಿಸಿದೆ.

೨೦.೨೦.೦೧.೨೦೨೦

ಆಯುಕ್ತರು

ಶಾಲಾ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರವರ ಸೂಕ್ತ ಕ್ರಮಕ್ಕಾಗಿ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು (ಜಿಲ್ಲಾ ಉಪನಿರ್ದೇಶಕರ ಮೂಲಕ) ಮುಂದಿನ ಕ್ರಮಕ್ಕಾಗಿ.
4. ರಾಜ್ಯದ ಎಲ್ಲಾ ತಾಲ್ಲೂಕು ಖಜಾನಾಧಿಕಾರಿಗಳು (ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೂಲಕ) ಮುಂದಿನ ಕ್ರಮಕ್ಕಾಗಿ.
5. ತಾಂತ್ರಿಕ ಸಹಾಯಕರು ಯೋ1 ಶಾಖೆ ಇವರಿಗೆ,ರಾಜ್ಯದ ಎಲ್ಲಾ ಉಪನಿರ್ದೇಶಕರುಗಳು(ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಇವರುಗಳಿಗೆ ಅನುದಾನ ಬಿಡುಗಡೆ ಮಾಡುವ ಕ್ರಮಕ್ಕಾಗಿ.

ಪ್ರತಿಯನ್ನು

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ.
3. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಇವರಿಗೆ ಮಾಹಿತಿಗಾಗಿ.
4. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಧಾರವಾಡ ಮತ್ತು ಕಲಬುರಗಿ ಇವರಿಗೆ ಮಾಹಿತಿಗಾಗಿ.
5. ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರುಗಳಿಗೆ(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
6. ಕಛೇರಿ ಪ್ರತಿ.

ಅನುಬಂಧ-ಅ

## 2023-24 Maintenance cost per school per year

| Sl No | Cleaning/Maintenance particulars | Cost for schools with children 1-50 | Cost for schools with children 51-100 | Cost for schools with children 101-500 | Cost for schools with children >500 |
|---|---|---|---|---|---|
| | **Unit Cost in Rs** | **20000** | **28000** | **33000** | **45000** |
| | **Toilet Maintenance** | | | | |
| 1 | Mop | 458 | 641 | 755 | 1030 |
| 2 | Brooms | 104 | 146 | 172 | 234 |
| 3 | Brooms for floor | 312 | 437 | 515 | 702 |
| 4 | Bucket | 520 | 728 | 858 | 1170 |
| 5 | Jug | 208 | 291 | 343 | 468 |
| 6 | Dust Bin | 728 | 1019 | 1201 | 1638 |
| 7 | Room and Toilet cleaning Liquid/Phenoil | 364 | 510 | 601 | 819 |
| 8 | Hand wash | 312 | 437 | 515 | 702 |
| 9 | Dust Cleaning cloth | 104 | 146 | 172 | 234 |
| 10 | Dust Pan | 208 | 291 | 343 | 468 |
| 11 | Toilet room cleaning brush | 208 | 291 | 343 | 468 |
| 12 | Tap repair service maintenanace | 2080 | 2912 | 3432 | 4680 |
| 13 | Soap | 42 | 58 | 69 | 94 |
| 14 | Labour charge for cleaning | 7488 | 10484 | 12356 | 16849 |
| | **Drinking water** | | | | |
| 15 | Water purifier service and candal replacement if available in school /Drinking Water related Maintenance | 6240 | 8736 | 10296 | 14041 |
| 16 | Miscelloneous | 624 | 873 | 1029 | 1403 |
| | Total | **20000** | **28000** | **33000** | **45000** |

21/9/2023

for ಉಪ ನಿರ್ದೇಶಕರು (ಯೋಜನೆ)

ಸಾರ್ವಜನಿಕ ಶಿಕ್ಷಣ ಇಲಾಖೆ [illegible]

[illegible]